National
Kannada
22.09.2025 7.35 pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಅರುಣಾಚಲ ಪ್ರದೇಶ ಇಟಾನಗರದಲ್ಲಿಂದು ೫ ಸಾವಿರದ ೧೦೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಯೋಜನೆಗಳಿಗೆ ಪ್ರಧಾನಿ ಚಾಲನೆ

೨. ಇಂಧನ ಸಂಗ್ರಹ ಯುಗದಲ್ಲಿ ಭಾರತ ಜಗತ್ತನ್ನು ಮುನ್ನಡೆಸಲಿದೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಪ್ಯಾಲೆಸ್ತೀನ್ ಅನ್ನು ಪ್ರತ್ಯೇಕ ರಾಷ್ಟ್ರವಾಗಿ ಪರಿಗಣಿಸಿದ ಬ್ರಿಟನ್

೪. ದೇಶಾದ್ಯಂತ ಇಂದಿನಿಂದ ನವರಾತ್ರಿ ಉತ್ಸವ ಆರಂಭ; ಮೈಸೂರಿನಲ್ಲಿ ದಸರಾ ಉದ್ಘಾಟಿಸಿದ ಸಾಹಿತಿ ಬಾನು ಮುಷ್ತಾಕ್

><><><><

ಅರುಣಾಚಲ ಪ್ರದೇಶದ ಇಟಾನಗರದಲ್ಲಿಂದು ಮೂರು ಸಾವಿರದ ೭೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಎರಡು ಪ್ರಮುಖ ಜಲವಿದ್ಯುತ್ ಯೋಜನೆಗಳಿಗೆ ಶಂಕುಸ್ಥಾಪನೆ ಸೇರಿದಂತೆ ಐದು ಸಾವಿರದ ನೂರು ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಭೇಟಿಯ ಭಾಗವಾಗಿ ಪ್ರಧಾನಿ, ಇತ್ತೀಚಿನ ಜಿಎಸ್‌ಟಿ ದರ ಪರಿಷ್ಕರಣೆಯ ಪರಿಣಾಮದ ಕುರಿತು ಸ್ಥಳೀಯ ತೆರಿಗೆದಾರರು, ವ್ಯಾಪಾರಿಗಳು ಮತ್ತು ಕೈಗಾರಿಕಾ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದರು. ನಂತರ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಕಳೆದ ದಶಕಕ್ಕೆ ಹೋಲಿಸಿದರೆ ಇಲ್ಲಿಗೆ ಆಗಮಿಸುವ ಪ್ರವಾಸಿಗರ ಸಂಖ್ಯೆ ದ್ವಿಗುಣಗೊಂಡಿದೆ. ಅರುಣಾಚಲಪ್ರದೇಶದ ಸಾಮರ್ಥ್ಯ ಪ್ರಕೃತಿ ಮತ್ತು ಸಂಸ್ಕೃತಿ ಪ್ರವಾಸೋದ್ಯಮವನ್ನು ಮೀರಿ ವಿಸ್ತರಿಸಿದೆ ಎಂದು ಹೇಳಿದರು. ನಂತರ ತ್ರಿಪುರಾಗೆ ಭೇಟಿ ನೀಡಿದ ಪ್ರಧಾನಿ ನರೇಂದ್ರ ಮೋದಿ, ಪ್ರಸಾದ್ ಯೋಜನೆಯಡಿ ಮಾತಾ ತ್ರಿಪುರ ಸುಂದರಿ ದೇವಾಲಯದ ಅಭಿವೃದ್ಧಿ ಕಾರ್ಯಗಳನ್ನು ಉದ್ಘಾಟಿಸಿದರು. ಇದೇ ವೇಳೆ ಪ್ರಧಾನಿಯವರು ದೇವಿಗೆ ಪೂಜೆ ಸಲ್ಲಿಸಿದರು ಹಾಗೂ ಶತಮಾನಗಳಷ್ಟು ಹಳೆಯದಾದ ದೇವಾಲಯದ ಶ್ರೀಮಂತ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಪ್ರಸ್ತುತಪಡಿಸುವ ಪ್ರದರ್ಶನವನ್ನು ವೀಕ್ಷಿಸಿದರು.

><><><><

ನವರಾತ್ರಿಯ ಮೊದಲ ದಿನದಂದು, ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ ಅರ್ಹ ಮನೆಗಳಿಗೆ ೨೫ ಲಕ್ಷ ಹೊಸ ಉಚಿತ ಅನಿಲ ಸಂಪರ್ಕಗಳನ್ನು ಒದಗಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಇಂದಿನಿಂದ ಉಜ್ವಲ ಕುಟುಂಬಕ್ಕೆ ಸೇರುತ್ತಿರುವ ಎಲ್ಲಾ ತಾಯಂದಿರು ಮತ್ತು ಸಹೋದರಿಯರಿಗೆ ಪ್ರಧಾನಿ ನರೇಂದ್ರ ಮೋದಿ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಸರ್ಕಾರದ ಈ

ಹೆಜ್ಜೆ ಈ ಪವಿತ್ರ ಹಬ್ಬದಂದು ಅವರಿಗೆ ಹೊಸ ಸಂತೋಷವನ್ನು ತರುವುದಲ್ಲದೆ, ಮಹಿಳಾ ಸಬಲೀಕರಣದ ಸಂಕಲ್ಪವನ್ನು ಬಲಪಡಿಸುತ್ತದೆ ಎಂದು ಹೇಳಿದ್ದಾರೆ.

><><><><

ನಾಳೆ ದೇಶಾದ್ಯಂತ ೧೦ನೇ ಆಯುರ್ವೇದ ದಿನ ಆಚರಿಸಲಾಗುತ್ತಿದೆ. ಈ ದಿನ ನೈಸರ್ಗಿಕ ಸಂಪನ್ಮೂಲಗಳ ಸುಸ್ಥಿರ ಬಳಕೆ ಔಷಧೀಯ ಯೋಜನೆಗಳ ಸಂರಕ್ಷಣೆ ಕುರಿತಂತೆ ಜಾಗೃತಿ ಮೂಡಿಸಲಾಗುತ್ತಿದೆ. ಗೋವಾದ ಅಖಿಲ ಭಾರತ ಆಯುರ್ವೇದ ಸಂಸ್ಥೆಯಲ್ಲಿ ನಾಳೆ ೧೦ನೇ ಆಯುರ್ವೇದ ದಿನವನ್ನು ಆಚರಿಸಲಾಗುವುದು. ಇದು ಸಾಂಪ್ರದಾಯಿಕ ಭಾರತೀಯ ಔಷಧದ ಜಾಗತಿಕ ಪ್ರಚಾರದಲ್ಲಿ ಒಂದು ಐತಿಹಾಸಿಕ ಮೈಲುಗಲ್ಲು ಎಂದು ಆಯುಷ್ ಸಚಿವ ಪ್ರತಾಪ್ ರಾವ್ ಜಾದವ್ ತಿಳಿಸಿದ್ದಾರೆ. ಭಾರತದ ಸಾಂಪ್ರದಾಯಿಕ ವೈದ್ಯಕೀಯ ವ್ಯವಸ್ಥೆಯು ಜಾಗತಿಕ ವೇದಿಕೆಯಲ್ಲಿ ಹೊಸ ಎತ್ತರವನ್ನು ತಲುಪುತ್ತಿರುವುದು ಎಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಕೇಂದ್ರ ಸರ್ಕಾರವು ಆಯುರ್ವೇದದ ಈ ಪರಂಪರೆಯನ್ನು ಪ್ರತಿಯೊಬ್ಬ ವ್ಯಕ್ತಿಯು ಕೊಂಡೊಯ್ಯುವ ಮತ್ತು ಆರೋಗ್ಯಕರ ಭಾರತ ಹಾಗೂ ಆರೋಗ್ಯಕರ ಜಗತ್ತು ನಿರ್ಮಿಸುವ ಗುರಿಯನ್ನು ಹೊಂದಿದೆ. ಈ ವರ್ಷದ ಧ್ಯೇಯ ವಾಕ್ಯ 'ಜನರು ಮತ್ತು ಗ್ರಹಕ್ಕಾಗಿ ಆಯುರ್ವೇದ' ಎಂದು ಸಚಿವರು ಹೇಳಿದ್ದಾರೆ. ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ನಾಳೆ ೧೦ನೇ ರಾಷ್ಟ್ರೀಯ ಆಯುರ್ವೇದ ದಿನ ಆಯೋಜಿಸಲಾಗಿದೆ. ಆಯುಷ್ ಮಾನ್ ಕಾರ್ಯಕ್ರಮಕ್ಕೆ ಹಿರಿಯ ನರರೋಗ ತಜ್ಞ ಹಾಗೂ ನಿಮ್ಹಾನ್ಸ್ ನ ನಿವೃತ್ತ ನಿರ್ದೇಶಕ ಡಾ.ಡಿ.ನಾಗರಾಜ್ ಚಾಲನೆ ನೀಡಲಿದ್ದಾರೆ.

><><><><

ಇಂಧನ ಸಂಗ್ರಹ ಯುಗದಲ್ಲಿ ಭಾರತ ಜಗತ್ತನ್ನು ಮುನ್ನಡೆಸಲಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ 'ಇಂಧನ ಸಂಗ್ರಹ- ಶುದ್ಧ ಇಂಧನ ಪರಿವರ್ತನೆ' ಕುರಿತ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಸಚಿವರು, ಎಲ್ಲಾ ಪಾಲುದಾರರ ಸಾಮೂಹಿಕ ಪ್ರಯತ್ನಗಳಿಂದ ಸ್ವಚ್ಛ ಮತ್ತು ಸುಸ್ಥಿರ ಭವಿಷ್ಯದತ್ತ ರಾಷ್ಟ್ರದ ಪ್ರಯಾಣವನ್ನು ಸಾಧಿಸಬಹುದು ಎಂದರು. ಸೋಡಿಯಂ-ಐಯಾನ್ ಬ್ಯಾಟರಿಯಂತಹ ಹೊಸ ತಂತ್ರಜ್ಞಾನ ಮಾರುಕಟ್ಟೆಯಲ್ಲಿ ಗಮನಾರ್ಹ ಆಸಕ್ತಿಯನ್ನು ಗಳಿಸುತ್ತಿದೆ ಎಂದು ಅವರು ಮಾಹಿತಿ ನೀಡಿದರು. ಮುಂದಿನ ಐದು ವರ್ಷಗಳಲ್ಲಿ ಭಾರತ ೨೪೮ ಗಿಗಾವ್ಯಾಟ್ ನವೀಕರಿಸಬಹುದಾದ ಇಂಧನವನ್ನು ಉತ್ಪಾದಿಸುವ ಗುರಿಯನ್ನು ಹೊಂದಿದೆ. ೨೦೩೦ ರ ವೇಳೆಗೆ ೫೦೦ ಗಿಗಾವ್ಯಾಟ್ ನವೀಕರಿಸಬಹುದಾದ ಇಂಧನವನ್ನು ಉತ್ಪಾದಿಸುವ ಗುರಿಯನ್ನು ಭಾರತ ಹೊಂದಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು.

><><><><

ಜೂನ್ ೧೨ ರಂದು ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾ ವಿಮಾನ ಅಪಘಾತದ ಕುರಿತು ನಡೆಯುತ್ತಿರುವ ತನಿಖೆಯು ನ್ಯಾಯಯುತ ಪಾರದರ್ಶಕ ಮತ್ತು ಸ್ವತಂತ್ರ್ಯ ಮಾನದಂಡಗಳನ್ನು ಪೂರೈಸುತ್ತದೆಯೇ ಎಂದು ಪರಿಶೀಲಿಸಲು ಸುಪ್ರೀಂ ಕೋರ್ಟ್ ಒಪ್ಪಿಗೆ ಸೂಚಿಸಿದೆ. ಸೇಫ್ಟಿ ಮ್ಯಾಟರ್ಸ್ ಫೌಂಡೇಶನ್ ಎಂಬ ಎನ್‌ಜಿಒ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕುರಿತು ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಎನ್. ಕೋಟೀಶ್ವರ್ ಸಿಂಗ್ ಅವರ ಪೀಠ ಕೇಂದ್ರ ನಾಗರಿಕ ವಿಮಾನಯಾನ

ಸಚಿವಾಲಯ, ವಿಮಾನ ಅಪಘಾತ ತನಿಖಾ ಬ್ಯೂರೋ ಮತ್ತು ನಾಗರಿಕ ವಿಮಾನಯಾನ ನಿರ್ದೇಶನಾಲಯಗಳಿಗೆ ನೋಟಿಸ್ ಜಾರಿ ಮಾಡಿದೆ.

><><><><

ಪ್ಯಾಲೇಸ್ತಿನ್ ಅನ್ನು ಪ್ರತ್ಯೇಕ ರಾಷ್ಟ್ರವಾಗಿ ಬ್ರಿಟನ್ ಅಧಿಕೃತವಾಗಿ ಗುರುತಿಸಿದೆ ಎಂದು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಘೋಷಿಸಿದ್ದಾರೆ. ಕೇವಲ ಗುರುತಿಸುವಿಕೆ ಬಿಕ್ಕಟ್ಟು ನಿವಾರಣೆಗೆ ಉತ್ತರವಲ್ಲ. ಸಂಘರ್ಷ ಪರಿಹಾರಕ್ಕೆ ಹೆಚ್ಚಿನ ಕ್ರಮದ ಅಗತ್ಯವಿದೆ. ಕದನ ವಿರಾಮದಿಂದ ಆರಂಭವಾಗಿ ಬಿಕ್ಕಟ್ಟಿನ ಶಾಂತಿಯುತ ಪರಿಹಾರದವರೆಗೆ ಶಾಂತಿಗಾಗಿ ಚೌಕಟ್ಟು ನಿರ್ಮಿಸಿ ನಾಯಕರೊಂದಿಗೆ ಒಮ್ಮತ ಸಾಧಿಸಲು ಪ್ರಯತ್ನಗಳು ಮುಂದುವರೆದಿವೆ ಎಂದು ಬ್ರಿಟನ್ ವಿದೇಶಾಂಗ ಸಚಿವಾಲಯ ತಿಳಿಸಿದೆ.

><><><><

ದುರ್ಗಾದೇವಿಯ ೯ ರೂಪಗಳನ್ನು ಪೂಜಿಸಲು ೯ ದಿನಗಳ ಕಾಲ ಆಚರಿಸಲಾಗುವ ನವರಾತ್ರಿ ಹಬ್ಬ ಇಂದಿನಿಂದ ಆರಂಭವಾಗಿದೆ. ಕರ್ನಾಟಕದಲ್ಲಿ ಈ ಹಬ್ಬವನ್ನು ದಸರಾ, ಪಶ್ಚಿಮ ಬಂಗಾಳದಲ್ಲಿ ದುರ್ಗಾ ಪೂಜಾ ಹೀಗೆ ಹಲವೆಡೆ ವಿವಿಧ ಹೆಸರುಗಳಲ್ಲಿ ಕರೆಯಲಾಗುತ್ತಿದೆ. ಭಾರತದಲ್ಲಿ ಆಚರಿಸಲಾಗುವ ಪ್ರಮುಖ ಹಬ್ಬಗಳಲ್ಲಿ ಒಂದಾಗಿರುವ ಈ ಹಬ್ಬದಲ್ಲಿ ಪ್ರತಿದಿನ ದೇವಿಯ ರೂಪಗಳನ್ನು ಒಂದೊಂದು ವರ್ಣದೊಂದಿಗೆ ಆಚರಿಸಲಾಗುತ್ತದೆ. ನವರಾತ್ರಿಯ ಕೊನೆಯ ದಿನ, ದೇವಿಯು ಮಹಿಷಾಸುರನ್ನು ಸಂಹರಿಸಿದ ಸಂಕೇತವಾಗಿ ವಿಜಯದಶಮಿಯನ್ನು ಆಚರಿಸಲಾಗುವುದು. ಕರ್ನಾಟಕದ ಮೈಸೂರಿನಲ್ಲಿ ನಡೆಯುತ್ತಿರುವ ವಿಶ್ವ ವಿಖ್ಯಾತ ಮೈಸೂರು ದಸರಾಗೆ ಇಂದು ಬೂಕರ್ ಪ್ರಶಸ್ತಿ ಪುರಸ್ಕೃತೆ ಬಾನು ಮುಷ್ತಾಕ್, ನಾಡ ದೇವಿ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದ್ದಾರೆ.  ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಸಚಿವರು ಉಪಸ್ಥಿತರಿದ್ದರು.

><><><><

ಸೇವೆ ಮತ್ತು ಸುಶಾಸನ, ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು, ಈ ವಿಶೇಷ ಸರಣಿ - 'ಸೇವಾ ಪರ್ವ'ದಲ್ಲಿ, ಕೇಂದ್ರ ಸರ್ಕಾರ ಸ್ಮಾರ್ಟ್ ಸಿಟಿ ಮಿಷನ್ ಮೂಲಕ ನಗರಗಳನ್ನು ಮರುರೂಪಿಸುತ್ತಿದೆ ಮತ್ತು ನಾಗರಿಕರ ಜೀವನ ಗುಣಮಟ್ಟವನ್ನು ಹೇಗೆ ಸುಧಾರಿಸುತ್ತಿದೆ ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

><><><><

ಸ್ಮಾರ್ಟ್ ಸಿಟಿ ಮಿಷನ್ ಭಾರತದ ನಗರಗಳ ಚಿತ್ರಣವನ್ನು ಮರುರೂಪಿಸುತ್ತಿದೆ. ೨೦೧೫ರ ಜೂನ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಪ್ರಾರಂಭಿಸಿದ ಈ ಉಪಕ್ರಮವು ಸ್ಮಾರ್ಟ್ ಮತ್ತು ಸುಸ್ಥಿರ ಪರಿಹಾರಗಳ ಮೂಲಕ ಭಾರತದ ನಗರಗಳಲ್ಲಿ ಜೀವನದ ಗುಣಮಟ್ಟವನ್ನು ಹೆಚ್ಚಿಸುವ ಗುರಿ ಹೊಂದಿದೆ. ಪುಣೆಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಗಳನ್ನು ಉದ್ಘಾಟಿಸಿದ್ದ ಪ್ರಧಾನಿಯವರು, ಸ್ಮಾರ್ಟ್ ಸಿಟಿ ಪರಿಕಲ್ಪನೆಯು ಸ್ವತಃ ಒಂದು ಜನಾಂದೋಲನವಾಗಿದೆ ಎಂದು ಹೇಳಿದ್ದರು.  ಕಳೆದ ದಶಕದಲ್ಲಿ, ಸ್ಮಾರ್ಟ್ ಸಿಟಿ ಮಿಷನ್ ಗಮನಾರ್ಹ ಪ್ರಗತಿಯನ್ನು ಕಂಡಿದೆ. ಎಂಟು ಸಾವಿರಕ್ಕೂ ಹೆಚ್ಚು

ಯೋಜನೆಗಳಲ್ಲಿ, ಈಗ ಸುಮಾರು ೯೪ ಪ್ರತಿಶತದಷ್ಟು ಯೋಜನೆಗಳು ಪೂರ್ಣಗೊಂಡಿವೆ. ಹೆಚ್ಚುವರಿಯಾಗಿ, ೧೩ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ಯೋಜನೆಗಳು ಅನುಷ್ಠಾನದ ಹಂತಗಳಲ್ಲಿವೆ. ಇದು ಸ್ಮಾರ್ಟ್ ಸಿಟಿ ಮಿಷನ್ ಅಡಿಯಲ್ಲಿ ಒಟ್ಟು ಹೂಡಿಕೆಯನ್ನು ಸುಮಾರು ೧.೬೪ ಲಕ್ಷ ಕೋಟಿ ರೂಪಾಯಿಗಳಿಗೆ ಹೆಚ್ಚಿಸಿದೆ.  ಈ ಉಪಕ್ರಮವು ಅಸ್ತಿತ್ವದಲ್ಲಿರುವ ಪ್ರದೇಶಗಳ ನವೀಕರಣ, ನಿರ್ದಿಷ್ಟ ವಲಯಗಳ ಪುನರಾಭಿವೃದ್ಧಿ ಮತ್ತು ನಗರಾದ್ಯಂತ ಸ್ಮಾರ್ಟ್ ಪರಿಹಾರಗಳನ್ನು ಸಂಯೋಜಿಸುತ್ತದೆ. ಇದಲ್ಲದೆ, ಶಾಲೆಗಳನ್ನು ಡಿಜಿಟಲ್ ತರಗತಿ ಕೊಠಡಿಗಳೊಂದಿಗೆ ಸಜ್ಜುಗೊಳಿಸಲಾಗುತ್ತಿದೆ, ಪಾರಂಪರಿಕ ತಾಣಗಳನ್ನು ಪುನರುಜ್ಜೀವನಗೊಳಿಸಲಾಗುತ್ತಿದೆ, ಸಾರ್ವಜನಿಕ ಸ್ಥಳಗಳನ್ನು ಪುನಃಸ್ಥಾಪಿಸಲಾಗುತ್ತಿದೆ ಮತ್ತು ಬೀದಿಗಳು ಪ್ರಕಾಶಮಾನವಾಗಿ ಮತ್ತು ಸುರಕ್ಷಿತವಾಗಿಸುತ್ತಿವೆ. ಆಧುನಿಕ ರಸ್ತೆಗಳು, ಸೈಕಲ್ ಟ್ರ್ಯಾಕ್‌ಗಳು ಮತ್ತು ಹಸಿರು ಕಾರಿಡಾರ್‌ಗಳಿಂದ ಹಿಡಿದು ಮುಂದುವರಿದ ಇಂಟಿಗ್ರೇಟೆಡ್ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರಗಳವರೆಗೆ, ಈ ಯೋಜನೆಗಳು ನಗರಗಳು ಕಾರ್ಯನಿರ್ವಹಿಸುವ ವಿಧಾನವನ್ನು ಮರುರೂಪಿಸುತ್ತಿವೆ. ಸ್ಮಾರ್ಟ್ ಸಿಟಿ ಮಿಷನ್ ಹತ್ತು ವರ್ಷಗಳನ್ನು ಪೂರೈಸುತ್ತಿರುವಾಗ, ಅದರ ಪರಿಣಾಮ ದೇಶಾದ್ಯಂತ ಗೋಚರಿಸುತ್ತಿದೆ. ಅಲ್ಲದೇ ನವ ಭಾರತಕ್ಕಾಗಿ ನಗರಾಭಿವೃದ್ಧಿಯನ್ನು ಮರು ವ್ಯಾಖ್ಯಾನಿಸುತ್ತದೆ.

**><><><><**

ಇಂದಿನಿಂದ ಜಾರಿಗೆ ಬಂದಿರುವ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು ದೇಶದ ಆರ್ಥಿಕ ಬೆಳವಣಿಗೆಯನ್ನು ವೇಗಗೊಳಿಸುತ್ತವೆ. ಅಲ್ಲದೇ  ಬಳಕೆ ಕೂಡ ಮತ್ತಷ್ಟು ಹೆಚ್ಚಾಗುತ್ತದೆ. ಇದರಿಂದಾಗಿ ಜಿಡಿಪಿಯಲ್ಲಿ ಸುಮಾರು ೨೦ ಲಕ್ಷ ಕೋಟಿ ರೂಪಾಯಿಗಳು ಹೆಚ್ಚಳವಾಗುತ್ತದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

**><><><><**

ಸ್ವಸ್ತ ನಾರಿ ಸಶಕ್ತ ಪರಿವಾರ್ ಅಭಿಯಾನದಡಿ ದೇಶಾದ್ಯಂತ ೨ ಲಕ್ಷ ೮೩ ಸಾವಿರಕ್ಕೂ ಹೆಚ್ಚು ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ.  ಸೆಪ್ಟೆಂಬರ್ ೧೭ ರಂದು ಪ್ರಾರಂಭವಾದ ಈ ಅಭಿಯಾನದಡಿ ಭಾರತದಾದ್ಯಂತ ಲಕ್ಷಾಂತರ ಮಹಿಳೆಯರು, ಮಕ್ಕಳು ಮತ್ತು ಕುಟುಂಬಗಳು ಸಮಗ್ರ ಆರೋಗ್ಯ ಸೇವೆಗಳಿಂದ ಪ್ರಯೋಜನ ಪಡೆಯುತ್ತಿದ್ದಾರೆ. ದೇಶಾದ್ಯಂತ ೭೬ ಲಕ್ಷಕ್ಕೂ ಹೆಚ್ಚು ನಾಗರಿಕರು ಈ ಅಭಿಯಾನಕ್ಕೆ ನೋಂದಾಯಿಸಿಕೊಂಡಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

**><><END><><**